# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 171 (217) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 09.12.2025 |
| ಉತ್ತರಿಸುವ ಸಚಿವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಚೆನ್ನೈ ಬೆಂಗಳೂರು ಕೈಗಾರಿಕಾ ಕಾರಿಡಾರ್ ಯೋಜನೆಯ ಮುಖ್ಯ ಉದ್ದೇಶಗಳೇನು? ಈ ಯೋಜನೆಯ ವ್ಯಾಪ್ತಿಯಲ್ಲಿ ರಾಜ್ಯದಲ್ಲಿ ಯಾವ ಯಾವ ಕೈಗಾರಿಕೆಗಳನ್ನು ಅಭಿವೃದ್ಧಿಪಡಿಸಲಾಗುವುದು; ಈ ಕೈಗಾರಿಕೆಗಳನ್ನು ಯಾವ ಯಾವ ಭಾಗಗಳಲ್ಲಿ ಸ್ಥಾಪಿಸಲಾಗುವುದು?<br>ಚೆನ್ನೈ ಬೆಂಗಳೂರು ಕೈಗಾರಿಕಾ ಕಾರಿಡಾರ್ ಯೋಜನೆಯ ಪ್ರಸ್ತುತ ಹಂತದ ಪ್ರಗತಿ ವಿವರ ನೀಡುವುದು? | "ಚೆನ್ನೈ-ಬೆಂಗಳೂರು ಇಂಡಸ್ಟ್ರಿಯಲ್ ಕಾರಿಡಾರ್- ತುಮಕೂರು ಇಂಡಸ್ಟ್ರಿಯಲ್ ಟೌನ್‌ಶಿಪ್ ಲಿಮಿಟೆಡ್ (ಸಿಬಿಐಸಿ-ಟಿಐಟಿಎಲ್) ಯೋಜನೆಯನ್ನು ಭಾರತ ಸರ್ಕಾರ (ಎನ್ಐಸಿಡಿಸಿ) ಮತ್ತು ಕಾರ್ನಾಟಕ ಸರ್ಕಾರದ (ಕೆಐಎಡಿಬಿ) ಸಹಭಾಗಿತ್ವದೊಂದಿಗೆ ತುಮಕೂರು ಜಿಲ್ಲೆ ಮತ್ತು ತಾಲ್ಲೂಕಿನ ಒಟ್ಟು 8313 ಎಕರೆ ಪ್ರದೇಶದಲ್ಲಿ ಯೋಜನೆಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ. ಈ ಪ್ರದೇಶದಲ್ಲಿ ನಗರೀಕರಣದ ಜೊತೆಗೆ ಮತ್ತಷ್ಟು ಆರ್ಥಿಕ ಅಭಿವೃದ್ಧಿಗೆ ಅಗತ್ಯವಿರುವ ಎಲ್ಲಾ ಮೂಲಸೌಕರ್ಯಗಳೊಂದಿಗೆ ಸಂಪೂರ್ಣ ಕ್ರಿಯಾತ್ಮಕ ಕೈಗಾರಿಕಾ ಪಟ್ಟಣವಾಗಿ ಬೆಳೆಯಲು ಉದ್ದೇಶಿಸಲಾಗಿದೆ. ಯೋಜನೆಯು ಸಂಪೂರ್ಣವಾಗಿ ಕೈಗಾರಿಕಾ ಪಟ್ಟಣವಾಗಿ ಅಭಿವೃದ್ಧಿ ಹೊಂದುತ್ತಿದ್ದಂತೆ, ಸುತ್ತಮುತ್ತಲಿನ ಪ್ರದೇಶಗಳಲ್ಲಿ ಆರ್ಥಿಕ ಚಟುವಟಿಕೆಯು ಮತ್ತಷ್ಟು ಉತ್ತೇಜಿಸುವುದು, ಇದರಿಂದಾಗಿ ಈ ಪ್ರದೇಶದ ಜಿಡಿಪಿ ಹಾಗೂ ಉದ್ಯೋಗಾವಕಾಶಗಳು ಹೆಚ್ಚಾಗುತ್ತವೆ.<br><br>ಎಲ್ಲಾ ಕೈಗಾರಿಕೆಗಳಾದ ಆಹಾರ ಮತ್ತು ಕೃಷಿ ಸಂಸ್ಕರಣಾ ಕೈಗಾರಿಕೆಗಳು, ಉಡುಪು ಮತ್ತು ಜವಳಿ, ಆಟೋ ಮತ್ತು ಆಟೋ ಘಟಕಗಳು, ಇತರ ಸಾರಿಗೆ ಉಪಕರಣಗಳು, ಎಂಜಿನಿಯರಿಂಗ್, ಎಲೆಕ್ಟ್ರಾನಿಕ್ಸ್, ಔಷಧೀಯ, ರಾಸಾಯನಿಕ ಕೈಗಾರಿಕೆಗಳು ಇಲ್ಲಿ ಸ್ಥಾಪನೆಯಾಗುತ್ತಿವೆ.<br><br>ತುಮಕೂರು ಜಿಲ್ಲೆ, ತುಮಕೂರು ತಾಲ್ಲೂಕಿನ ಬೆಳ್ಳಾವಿ ಹೋಬಳಿಯ ಗೌಡನ ಹಳ್ಳಿ, ಸೋರೆಕುಂಟೆ, ಗಿರಿಯನಹಳ್ಳಿ, ಪುರುದಕುಂಟೆ, ಪಿ. ಗೊಲ್ಲಹಳ್ಳಿ, ಲಿಂಗನಹಳ್ಳಿ, ಮಲ್ಲೇನಹಳ್ಳಿ, ನೆಲಹಾಳು,, ಚಿಕ್ಕಶೀಬಿ, ಶೀಬಿ, ಬೆಳ್ಳಾವಿ, ಕೋರ ಮತ್ತು ಶಿರಾ ತಾಲ್ಲೂಕಿನ ಕಳ್ಳಂಬೆಳ್ಳ ಹೋಬಳಿಯ ಹುಂಜನಾಳು, ಸೋಮಸಾಗರ, ಕೆಂದಾಳಿಹಳ್ಳಿ, ಬೋರಸಂದ್ರ ತಿಪ್ಪನಹಳ್ಳಿ, ಗ್ರಾಮಗಳ ವ್ಯಾಪ್ತಿಯಲ್ಲಿ ಒಟ್ಟು 8313 ಎಕರೆ ಪ್ರದೇಶದಲ್ಲಿ ಯೋಜನೆಯನ್ನು ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ. |

| | | |
|---|---|---|
| | | ತುಮಕೂರು ಜಿಲ್ಲೆಯ, ತುಮಕೂರು ತಾಲ್ಲೂಕಿನ ಚೆನ್ನೈ ಬೆಂಗಳೂರು ಕೈಗಾರಿಕಾ ಕಾರಿಡಾರ್ ಯೋಜನೆಯಡಿಯಲ್ಲಿ ಪ್ರಸ್ತುತ ಮೊದಲನೇ ಹಂತದ (PHASE-A) 1736.20 ಎಕರೆ ವಿಸ್ತೀರ್ಣದಲ್ಲಿ ಅಗತ್ಯ ಮೂಲ ಸೌಕರ್ಯಗಳಾದ ರಸ್ತೆ, ಚರಂಡಿ, ಸೇತುವೆಗಳು, ವಿದ್ಯುತ್ ಸರಬರಾಜು, ನೀರು ಸರಬರಾಜು, ಕೈಗಾರಿಕಾ ತ್ಯಾಜ್ಯ ಸಂಸ್ಕರಣಾ ಘಟಕ , ಕೊಳಚೆ ನೀರು ಸಂಸ್ಕರಣಾ ಘಟಕಗಳ ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ.<br><br>ಸದರಿ ಯೋಜನೆಯನ್ನು ಜನವರಿ-2027 ರ ಅಂತ್ಯದೊಳಗಾಗಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುತ್ತದೆ. |

**ಸಂಖ್ಯೆ: ಸಿಐ 604 ಐಎಪಿ 2025**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು